## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಿಂದುಳಿದ ವರ್ಗಗಳ ಕಾನೂನು ಪದವಿಧರ ಅಭ್ಯರ್ಥಿಗಳಿಗೆ ನೀಡುವ ಮಾಸಿಕ ತರಬೇತಿ ಭತ್ಯೆಯನ್ನು ರೂ.1000/- ದಿಂದ ರೂ.2000/-ಗಳಿಗೆ ಹೆಚ್ಚಿಸುವ ಬಗ್ಗೆ.

ಓದಲಾಗಿದೆ:-
1. ಸರ್ಕಾರದ ಆದೇಶ ಸಂಖ್ಯೆ:ಸಕಇ 116 ಬಿಎಂಎಸ್ 1999, ದಿನಾಂಕ:07.10.1999.
2. 2016-17ನೇ ಸಾಲಿನ ಆಯವ್ಯಯ ಭಾಷಣದ ಘೋಷಣೆಯ ಕಂಡಿಕೆ:193.
3. ಹಿಂವಕಇ/ತರಬೇತಿ-1/ಕಾ.ತ/ಸಿಆರ್-1/2016-17, ದಿನಾಂಕ:21.04.2016.

******

**ಪ್ರಸ್ತಾವನೆ:-**

ಮೇಲೆ ಓದಲಾದ (1)ರಲ್ಲಿ 1999-2000ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಕಾನೂನು ಪಧವಿದರರಿಗೆ ತರಬೇತಿ ಭತ್ಯೆ ನೀಡುವ ಕಾರ್ಯಕ್ರಮದಡಿ ತರಬೇತಿದಾರರ ತರಬೇತಿ ಭತ್ಯೆಯನ್ನು ಮಾಸಿಕ ರೂ.1000/-ದಂತೆ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ (2)ರಲ್ಲಿ ವಕೀಲ ವೃತ್ತಿಯಲ್ಲಿ ತರಬೇತಿ ಪಡೆಯುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ನೀಡುವ ಮಾಸಿಕ ತರಬೇತಿಯನ್ನು ಹೆಚ್ಚಿಸಲು ಸಂಬಂಧಿಸಿದಂತೆ 2016-17ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ:193ರಲ್ಲಿ ಈ ಕೆಳಗಿನಂತೆ ಘೋಷಿಸಲಾಗಿದೆ.

**"ಕಾನೂನು ಪಧವೀದರರ ಮಾಸಿಕ ತರಬೇತಿ ಭತ್ಯೆಯನ್ನು ರೂ.1000/-ದಿಂದ ರೂ.2000/-ಗಳಿಗೆ ಹೆಚ್ಚಿಸಲಾಗುವುದು"**

ಮೇಲೆ ಓದಲಾದ (3) ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಈ ಇಲಾಖೆಯಿಂದ ಆಯ್ಕೆಯಾಗಿದ್ದು, ವಕೀಲ ವೃತ್ತಿಯಲ್ಲಿ ತರಬೇತಿ ಪಡೆಯುವ ಹಿಂದುಳಿದ ವರ್ಗಗಳ ಕಾನೂನು ಪಧವೀದರ ಅಭ್ಯರ್ಥಿಗಳಿಗೆ ನೀಡುವ ಮಾಸಿಕ ತರಬೇತಿ ಭತ್ಯೆಯನ್ನು 2016-17ನೇ ಸಾಲಿನಿಂದ ಅನ್ವಯಿಸುವಂತೆ ರೂ.1000/-ದಿಂದ ರೂ.2000/-ಗಳಿಗೆ ಹೆಚ್ಚಿಸಲು ಆದೇಶ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 371 ಬಿಎಂಎಸ್ 2016, ಬೆಂಗಳೂರು**
**ದಿನಾಂಕ: 23 -07-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2016-17ನೇ ಸಾಲಿನಿಂದ ಹಿಂದುಳಿದ ವರ್ಗಗಳ ಇಲಾಖೆಯಿಂದ ವಕೀಲ ವೃತ್ತಿಯಲ್ಲಿ ತರಬೇತಿ ಪಡೆಯುವ ಹಿಂದುಳಿದ ವರ್ಗಗಳ ಕಾನೂನು ಪಧವೀದರ ಅಭ್ಯರ್ಥಿಗಳಿಗೆ ನೀಡುವ ಮಾಸಿಕ ತರಬೇತಿ ಭತ್ಯೆಯನ್ನು ರೂ.1000/-ದಿಂದ ರೂ.2000/-ಗಳಿಗೆ ಹೆಚ್ಚಿಸಿ ಆದೇಶ ನೀಡಿದೆ.

ಸದರಿ ವೆಚ್ಚವನ್ನು 2016-17ನೇ ಸಾಲಿನ ಲೆಕ್ಕಶೀರ್ಷಿಕೆ:2225-03-277-02-37ರಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

....2

ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ:ಆಇ 450 ವೆಚ್ಚ-3/2016, ದಿನಾಂಕ:18.06.2016 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿ 81 ಐಎಂಎಂ 2016, ದಿನಾಂಕ:12.07.2016ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

ಆರ್. ಭಾಸ್ಕರ್

(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ(ವೆಚ್ಚ), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
6. ರಾಜ್ಯದಲ್ಲಿನ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.

   (5–6: ಆಯುಕ್ತರು, ಹಿಂ.ವ.ಕ.ಇ.ಇವರ ಮುಖಾಂತರ)
7. ನಿರ್ದೇಶಕರು, ಯೋಜನಾ ಇಲಾಖೆ, ಬೆಂಗಳೂರು.

ಪ್ರತಿ:-

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆರವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆರವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಕರ್ನಾಟಕ ಸರ್ಕಾರ

ಸಂ:ಬಿಸಿಡಬ್ಲ್ಯೂ 371 ಬಿಎಂಎಸ್ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:24.08.2016.

## ತಿದ್ದುಪಡಿ ಆದೇಶ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಆಯ್ಕೆಯಾಗಿರುವ ವಕೀಲ ವೃತ್ತಿ ತರಬೇತಿ ಪಡೆಯುವ ಹಿಂದುಳಿದ ವರ್ಗಗಳ ಕಾನೂನು ಪದವಿಧರ ವಿದ್ಯಾರ್ಥಿಗಳಿಗೆ ನೀಡುವ ಮಾಸಿಕ ತರಬೇತಿ ಭತ್ಯೆಯನ್ನು ಹೆಚ್ಚಿಸಲು ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 371 ಬಿಎಂಎಸ್ 2016, ದಿನಾಂಕ:23.07.2016ರ ಆದೇಶ ಭಾಗದಲ್ಲಿ ಸದರಿ ವೆಚ್ಚವನ್ನು 2016–17ನೇ ಸಾಲಿನ ಲೆಕ್ಕಶೀರ್ಷಿಕೆ:2225-03-277-02-37ರಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು, ಎಂಬುದನ್ನು **"ಸದರಿ ವೆಚ್ಚವನ್ನು 2016–17ನೇ ಸಾಲಿನ ಜಿಲ್ಲಾವಲಯ ಯೋಜನೆ ಲೆಕ್ಕಶೀರ್ಷಿಕೆ:2225-00-103-0-58 ರಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು"** ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

C- 2958
25/08/16

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಇವರಿಗೆ:

1/9/16

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ(ವೆಚ್ಚ), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
6. ರಾಜ್ಯದಲ್ಲಿನ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
7. ನಿರ್ದೇಶಕರು, ಯೋಜನಾ ಇಲಾಖೆ, ಬೆಂಗಳೂರು.

ಆಯುಕ್ತರು,
ಹಿಂ.ವ.ಕ.ಇ.ಇವರ
ಮು.ಖಾಂತರ

ಪ್ರತಿ:-

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.